ಪ್ರಸ್ತಾವದ ಅಂಗೀಕಾರ

ಶ್ರೀ. ಸಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ರ ಮೈಸೂರು ತಂಬಾಕು ಕಂಪನಿ (ಷೇರುಗಳ ಅರ್ಜನೆ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :

ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ರ ಮೈಸೂರು ತಂಬಾಕು ಕಂಪನಿ (ಷೇರುಗಳ ಅರ್ಜನೆ)ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಅಂಗೀಕರಿಸಲಾಯಿತು)

(ಆ) ಕರ್ನಾಟಕ ಶರೀರ ರಚನಾ ಶಾಸ್ತ್ರ (ತಿದ್ದುಪಡಿ) ವಿಧೇಯಕ, 1998

ಪರ್ಯಾಲೋಚನಾ ಪ್ರಸ್ತಾವ

ಡಾ. ಎಂ. ಶಂಕರ್ ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿ ಇರುವ 1998ನೇ ಸಾಲಿನ ಕರ್ನಾಟಕ ಶರೀರ ರಚನಾ ಶಾಸ್ತ್ರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು

ಡಾ. ಎಂ. ಶಂಕರ್ ನಾಯಕ್ : ಯಾವುದೇ ಒಬ್ಬ ವ್ಯಕ್ತಿ ತನ್ನ ಮರಣಕ್ಕೆ ಮೊದಲು ತನ್ನ ಶರೀರವನ್ನು ಅಥವಾ ಶರೀರದ ಯಾವುದೇ ಭಾಗವನ್ನು ಶರೀರ ರಚನಾ ಪರೀಕ್ಷೆ ಅಥವಾ ಅಂಗಛೇದನ ಉದ್ದೇಶಕ್ಕಾಗಿ ಅಥವಾ ಅದೇ ರೀತಿಯ ಇತರ ಉದ್ದೇಶಕ್ಕಾಗಿ ದಾನ ಮಾಡುವ ಉದ್ದೇಶವನ್ನು ಎರಡು ಅಥವಾ ಹೆಚ್ಚು ವ್ಯಕ್ತಿಗಳ ಸಮ್ಮುಖದಲ್ಲಿ ಬರಹ ಮೂಲಕ ವ್ಯಕ್ತಪಡಿಸಲು ಅನುವು ಮಾಡಿಕೊಡಲು ಅವಕಾಶ ಕಲ್ಪಿಸುವುದಕ್ಕಾಗಿ ಈ ರಚನೆ. ಈ ವಿಧೇಯಕವನ್ನು ಅದಕ್ಕಾಗಿ ಮಂಡಿಸಲಾಗಿದೆ. ಹಿಂದೆ ಯಾವುದೇ ವ್ಯಕ್ತಿ ತನ್ನ ಬಾಡಿಯನ್ನು ಡೊನೇಟ್ ಮಾಡಬೇಕಾದರೆ ಯಾವುದಾದರೂ ಅನಾಟಮಿಕಲ್ ಡಿಸೆಕ್ಷನ್ ಅಥವಾ ಬೇರೆ ವಿಚಾರದಲ್ಲಿ ಅವರು ಏನಾದರೂ ಸ್ವಇಚ್ಛೆಯಿಂದ ಬರೆದುಕೊಟ್ಟಿದ್ದರೆ ಅಂತಹವರು ಡೊನೇಟ್ ಮಾಡಬೇಕಾಗಿತ್ತು.

ಶ್ರೀ. ಮಲ್ಲಿಕಾರ್ಜುನ ಖರ್ಗೆ : ಮಾನ್ಯ ಮುಖ್ಯಮಂತ್ರಿಗಳನ್ನು ಕೇಳಿಯೇ ಈ ಪ್ರಸ್ತಾವವನ್ನು ತಂದಿದ್ದೀರಾ? ಏಕೆಂದರೆ ಶರೀರದ ಯಾವುದೋ ಭಾಗ ತೆಗೆದುಕೊಳ್ಳಬೇಕು, ಕೊಡಬೇಕು ಎಂದು ಹೇಳಿದ್ದೀರಲ್ಲಾ, ಮಾನ್ಯ ಮುಖ್ಯಮಂತ್ರಿಗಳನ್ನು ಕೇಳಿಕೊಂಡೇ ತಂದಿರೋ ಹೇಗೆ ಎಂದು ಕೇಳುತ್ತಿದ್ದೇನೆ.

ಡಾ. ಎಂ. ಶಂಕರ್ ನಾಯಕ್ : ಅದು ಸ್ವಇಚ್ಛೆಯಿಂದ ಬರೆದುಕೊಡತಕ್ಕದ್ದು. ಶರೀರದ ಯಾವುದೇ ಭಾಗ ಅಥವಾ ಶರೀರವನ್ನು ಡೊನೇಟ್ ಮಾಡತಕ್ಕದ್ದು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ರ ಕರ್ನಾಟಕ ಶರೀರ ರಚನಾ ಶಾಸ್ತ್ರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು...

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ಮತ್ತು 3ರವರೆಗೆ

ಅಧ್ಯಕ್ಷರು : "ಖಂಡ 2ಮತ್ತು 3 ರವರೆಗೆ ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3ರವರೆಗೆ ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಡಾ. ಎಂ. ಶಂಕರ ನಾಯಕ್ (ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಮಂತ್ರಿ) : ಮಾನ್ಯ ಅಧ್ಯಕ್ಷರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ನೇ ಸಾಲಿನ ಕರ್ನಾಟಕ ಶರೀರ ರಚನಾ ಶಾಸ್ತ್ರ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೊರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ನೇ ಸಾಲಿನ ಕರ್ನಾಟಕ ಶರೀರ ರಚನಾ ಶಾಸ್ತ್ರ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(೫) ಕರ್ನಾಟಕ ಗೃಹ ನಿರ್ಮಾಣ ಮಂಡಲಿ (ತಿದ್ದುಪಡಿ)ವಿಧೇಯಕ1999

ಪರ್ಯಾಲೋಚನಾ ಪ್ರಸ್ತಾವ

ಶ್ರೀ. ಎಂ. ಪಿ. ಪ್ರಕಾಶ್ (ಮಾನ್ಯ ಗ್ರಾಮೀಣಾಭಿವೃದ್ಧಿ, ವಾರ್ತಾ ಮತ್ತು ಪ್ರಚಾರ ಇಲಾಖಾ ಮಂತ್ರಿ) : ಮಾನ್ಯ ಅಧ್ಯಕ್ಷರೆ, "ಕರ್ನಾಟಕ ಗೃಹ ನಿರ್ಮಾಣ ಮಂಡಲಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.